# ಕರ್ನಾಟಕ ವಿಧಾನ ಪರಿಷತ್ತು

**1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 771(624)**
**2. ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)**
**3. ಉತ್ತರಿಸುವ ದಿನಾಂಕ : 12-12-2025**
**4. ಉತ್ತರಿಸುವ ಸಚಿವರು : ಮಾನ್ಯ ಕಾರ್ಮಿಕ ಸಚಿವರು**

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಬಾಲ ಕಾರ್ಮಿಕರ ನಿರ್ಮೂಲನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು; | **ರಾಜ್ಯದಲ್ಲಿ ಬಾಲ ಕಾರ್ಮಿಕರ ನಿರ್ಮೂಲನೆಗೆ ಸರ್ಕಾರವು ಈ ಕೆಳಕಂಡ ಪ್ರಮುಖ ಕ್ರಮಗಳನ್ನು ಕೈಗೊಂಡಿರುತ್ತದೆ.**<br><br>1. ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯನ್ನು ಸ್ಥಾಪಿಸಿದ್ದು, ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ನಿಯಮಗಳು 2017(ಕೇಂದ್ರ/ರಾಜ್ಯ) ಹಾಗೂ ಎಸ್.ಓ.ಪಿ 2017(ಕೇಂದ್ರ/ರಾಜ್ಯ) ಯನ್ನು ಪರಿಣಾಮಕಾರಿ ಅನುಷ್ಠಾನ ಮಾಡಲಾಗಿದೆ.<br><br>2. ಜಿಲ್ಲೆಗಳಲ್ಲಿ ಜಿಲ್ಲಾ ದಂಡಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಕಾರ್ಯಪಡೆ (Task Force)ಯನ್ನು ಹಾಗೂ ತಾಲ್ಲೂಕಿನಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಕಾರ್ಯಪಡೆ (Task Force)ಯನ್ನು ರಚಿಸಲಾಗಿದೆ.<br><br>3. ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ಪರಿಣಾಮಕಾರಿಯಾಗಿ ನಿರ್ಮೂಲನೆ ಮಾಡುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಲಹಾ ಸಮಿತಿ, ಕಾರ್ಯಕಾರಿ ಸಮಿತಿಗಳನ್ನು ಹಾಗೂ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಬಾಲ ಕಾರ್ಮಿಕತೆ ನಿರ್ಮೂಲನೆ ಹಾಗೂ ಪುನರ್ವಸತಿ ಸಮಿತಿಗಳನ್ನು ರಚಿಸಲಾಗಿರುತ್ತದೆ.<br><br>4. ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕಲಂ 17ರಡಿ ಸರ್ಕಾರದ 11 ಇಲಾಖೆಗಳ ಅಧಿಕಾರಿಗಳನ್ನು ಹಾಗೂ ಕಲಂ 16 ರಡಿಯಲ್ಲಿ ಪೊಲೀಸ್ ಇಲಾಖೆ ಹಾಗೂ ಕಾರ್ಮಿಕ ಇಲಾಖೆಯ ಅಧಿಕಾರಿ/ನಿರೀಕ್ಷಕರನ್ನು ನಿರೀಕ್ಷಕರುಗಳನ್ನಾಗಿ ನೇಮಿಸಲಾಗಿದೆ. ಅಧಿಸೂಚಿಸಲ್ಪಟ್ಟ ಅಧಿಕಾರಿಗಳ ಹೋಬಳಿವಾರು ತಂಡವನ್ನು ರಚಿಸಿ ಪ್ರತಿಯೊಂದು ತಂಡವೂ ಮಾಸಿಕ ಕನಿಷ್ಠ 15 ತಪಾಸಣೆಗಳನ್ನು ಕೈಗೊಳ್ಳಲು ನಿರ್ದೇಶನ ನೀಡಲಾಗಿದ್ದು, ತಪಾಸಣೆಗಳಲ್ಲಿ/ದಾಳಿಗಳಲ್ಲಿ ಪತ್ತೆಯಾದ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿ (Child Welfare Committee)ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡಲು ಕ್ರಮ ಕೈಗೊಳ್ಳುವುದು ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿ, ಪರಿಶಿಷ್ಟ |

ಪಂಗಡ, ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ / ಕಿತ್ತೂರು ರಾಣಿ ಚೆನ್ನಮ್ಮ/ ಅಟಲ್ ಬಿಹಾರಿ ವಾಜಪೇಯಿ/ ಶ್ರೀಮತಿ ಇಂದಿರಾಗಾಂಧಿ/ ಡಾ|| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಮತ್ತು ಶ್ರೀ ನಾರಾಯಣ ಗುರು ಶಾಲೆಗಳಿಗೆ ವಿಶೇಷ ವರ್ಗಗಳ ಅಭ್ಯರ್ಥಿಗಳನ್ನು ಪ್ರವೇಶ ಪರೀಕ್ಷೆ ಇಲ್ಲದೆ ನೇರವಾಗಿ ದಾಖಲಾತಿ ಮಾಡಲಾಗುತ್ತಿದೆ.

5. ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯ ನಿರ್ಮೂಲನೆ ಕುರಿತು ವ್ಯಾಪಕವಾದ ಜಾಗೃತಿ ಮೂಡಿಸಲು ಗೋಡೆ ಬರಹಗಳು, ಕರಪತ್ರಗಳು, ಆಟೋ ಪ್ರಚಾರಗಳು, ತರಬೇತಿ ಕಾರ್ಯಾಗಾರಗಳು, ಬಿತ್ತಿ ಪತ್ರಗಳು, ಬೀದಿನಾಟಕಗಳು ಹಾಗೂ ಕಾನೂನು ಅರಿವು-ನೆರವು ಕಾರ್ಯಕ್ರಮಗಳ ನಿರಂತರ ಆಯೋಜನೆ ಹಾಗೂ ಸಾಂಪ್ರದಾಯಿಕ ಮಾಧ್ಯಮಗಳು ಹಾಗೂ ಆಧುನಿಕ ವಿದ್ಯುನ್ಮಾನ/ ಮುದ್ರಣ ಮಾಧ್ಯಮಗಳನ್ನು ಬಳಸಿಕೊಂಡು ಈ ಬಗ್ಗೆ "ಅರಿವು-ನೆರವು" ಕಾರ್ಯವನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಡೆಸಲಾಗುತ್ತಿದೆ.

(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಕಡೆಗಳಲ್ಲಿ ಬಾಲ ಕಾರ್ಮಿಕರನ್ನು ಗುರುತಿಸಿ ರಕ್ಷಿಸಲಾಗಿದೆ;
ಇದಕ್ಕಾಗಿ ಹಮ್ಮಿಕೊಳ್ಳಲಾದ ಜಾಗೃತಿ ಕಾರ್ಯಕ್ರಮಗಳು ಫಲ ನೀಡಿವೆಯೇ;

**ಕಳೆದ ಮೂರು ವರ್ಷಗಳಲ್ಲಿ ಬಾಲ ಕಾರ್ಮಿಕರನ್ನು ಗುರುತಿಸಿ ರಕ್ಷಿಸಲಾದ ವಿವರಗಳು ಈ ಕೆಳಕಂಡಂತಿರುತ್ತದೆ.**

| ಕ್ರ. ಸಂ. | ವರ್ಷ | ಗುರುತಿಸಿ ರಕ್ಷಿಸಲಾದ ಬಾಲ ಕಾರ್ಮಿಕ ಸಂಖ್ಯೆ |
|---|---|---|
| 01) | 2022-23 | 148 |
| 02) | 2023-24 | 177 |
| 03) | 2024-25 | 143 |
| 04) | 2025-26 **(30ನೇ ನವೆಂಬರ್-2025 ರವರೆಗೆ)** | 105 |

ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡಲು ಹಮ್ಮಿಕೊಳ್ಳಲಾದ ಜಾಗೃತಿ ಕಾರ್ಯಕ್ರಮಗಳು ಫಲ ನೀಡಿವೆ.

(ಇ) ಜಾಗೃತಿ ಕಾರ್ಯಕ್ರಮಗಳಿಗಾಗಿ ವ್ಯಯಿಸಿದ ಮೊತ್ತವೆಷ್ಟು; ಜಾಗೃತಿ ಕಾರ್ಯಕ್ರಮಗಳಿಂದಾಗಿ ಬಾಲ ಕಾರ್ಮಿಕರ ಪದ್ಧತಿ ಕಡಿಮೆಯಾಗುತ್ತಿದೆಯೇ?

**ಕಳೆದ 03 ವರ್ಷಗಳಲ್ಲಿ ಜಾಗೃತಿ ಕಾರ್ಯಕ್ರಮಗಳಿಗೆ ವೆಚ್ಚ ಮಾಡಲಾದ ಮೊತ್ತದ ವಿವರಗಳು ಈ ಕೆಳಕಂಡಂತಿರುತ್ತದೆ.**

| ಕ್ರ. ಸಂ | ವರ್ಷ | ಜಾಗೃತಿ ಕಾರ್ಯಕ್ರಮಗಳಿಗೆ ವೆಚ್ಚಮಾಡಲಾದ ಮೊತ್ತ (ರೂ.ಗಳಲ್ಲಿ) |
|---|---|---|
| 01) | 2022-23 | 86,25,845/- |
| 02) | 2023-24 | 68,80,108/- |
| 03) | 2024-25 | 82,90,675/- |
| 04) | 2025-26 **(30ನೇ ನವೆಂಬರ್-2025ರವರೆಗೆ)** | 40,24,537/- |

ಜಾಗೃತಿ ಕಾರ್ಯಕ್ರಮಗಳಿಂದಾಗಿ ಬಾಗಲಕೋಟೆ, ಗದಗ, ಉತ್ತರಕನ್ನಡ ಹಾಗೂ ಬೀದರ್ ಜಿಲ್ಲೆಗಳಲ್ಲಿ ಬಾಲಕಾರ್ಮಿಕ ಪದ್ಧತಿ ಕಡಿಮೆಯಾಗಿರುವುದು ಕಂಡು ಬರುತ್ತದೆ.

ಸಂಖ್ಯೆ: ಕಾಇ 78 ಸಿಎಲ್ ಸಿ 2025

**(ಸಂತೋಷ್ ಎಸ್ ಲಾಡ್)**
ಕಾರ್ಮಿಕ ಸಚಿವರು